# ಕರ್ನಾಟಕ ಲೋಕಸೇವಾ ಆಯೋಗ

ಸಂಖ್ಯೆ: ಪಿಎಸ್ ಸಿ 942 ಇ(1)2024-25

ಲೋಕ ಸೇವಾ ಆಯೋಗದ ಕಛೇರಿ,
"ಉದ್ಯೋಗ ಸೌಧ",
ಬೆಂಗಳೂರು, ದಿನಾಂಕ: 16-08-2024.

## ::ಪತ್ರಿಕಾ ಪ್ರಕಟಣೆ::

ಆಯೋಗವು 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ 'ಎ' ಮತ್ತು 'ಬಿ' ವೃಂದದ ಒಟ್ಟು 384 ಹುದ್ದೆಗಳ ನೇಮಕಾತಿಗೆ ಸಂಖ್ಯೆ:ಪಿಎಸ್ ಸಿ 509 ಇ(1)/2023-24, ದಿನಾಂಕ:26-02-2024ರಲ್ಲಿ ಅಧಿಸೂಚನೆ ಹೊರಡಿಸಿದ್ದು, ಪೂರ್ವಭಾವಿ ಪರೀಕ್ಷೆಯನ್ನು ದಿನಾಂಕ:27-08-2024ರಂದು ನಡೆಸಲು ನಿಗದಿಪಡಿಸಿರುತ್ತದೆ. ಅಭ್ಯರ್ಥಿಗಳು ಸಾಮಾಜಿಕ ಜಾಲತಾಣ ಹಾಗೂ ಇತರೆ ಯಾವುದೇ ತಪ್ಪು ಮಾಹಿತಿಗಳಿಗೆ ಮತ್ತು ಊಹಾಪೋಹಗಳಿಗೆ ಗೊಂದಲಕ್ಕೀಡಾಗದೇ ಆಯೋಗವು ಸದರಿ ನೇಮಕಾತಿಗೆ ದಿನಾಂಕ:27-08-2024ರಂದು ನಡೆಸಲಿರುವ ಪೂರ್ವಭಾವಿ ಪರೀಕ್ಷೆಯ ಪ್ರವೇಶ ಪತ್ರವನ್ನು ಆಯೋಗದ ವೆಬ್‌ಸೈಟ್ **http://kpsc.kar.nic.in**ನಿಂದ ದಿನಾಂಕ:16-08-2024ರ ಸಂಜೆ 6.00ರ ನಂತರ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

ಸದರಿ ಹುದ್ದೆಗಳ ಪೂರ್ವಭಾವಿ ಪರೀಕ್ಷೆಯನ್ನು ವಸ್ತುನಿಷ್ಠ ಬಹು ಆಯ್ಕೆ ಮಾದರಿಯಲ್ಲಿ ನಡೆಸಲಾಗುವುದು. ಸದರಿ ಪರೀಕ್ಷೆಯ ವೇಳಾಪಟ್ಟಿಯು ಆಯೋಗದ ವೆಬ್‌ಸೈಟ್‌ನಲ್ಲಿ ಲಭ್ಯವಿರುತ್ತದೆ. ಸದರಿ ಪರೀಕ್ಷೆಯ ವೇಳಾಪಟ್ಟಿಯಲ್ಲಿ ಯಾವುದೇ ರೀತಿಯ ಬದಲಾವಣೆಗಳು ಇರುವುದಿಲ್ಲ. ಈ ಮಾಹಿತಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

**ವಿಶೇಷ ಸೂಚನೆ:**

1. **ಸದರಿ ನೇಮಕಾತಿಗೆ ಅರ್ಜಿ ಸಲ್ಲಿಸುವ ಸಮಯದಲ್ಲಿ ಪೂರ್ವಭಾವಿ ಪರೀಕ್ಷೆ ಬರೆಯಲು ಒಟ್ಟು 416 ಅಂಗವಿಕಲ ಅಭ್ಯರ್ಥಿಗಳು ಲಿಪಿಕಾರರ ಸಹಾಯವನ್ನು ಕೋರಿರುತ್ತಾರೆ. ಅದರಲ್ಲಿ ಒಟ್ಟು 157 ಅಂಗವಿಕಲ ಅಭ್ಯರ್ಥಿಗಳು ಆಯೋಗದ ವತಿಯಿಂದ ಲಿಪಿಕಾರರನ್ನು ಒದಗಿಸುವಂತೆ ಕೋರಿದ್ದು, ಅವರ ಕೋರಿಕೆಯಂತೆ ಲಿಪಿಕಾರರ ಸೌಲಭ್ಯವನ್ನು ಒದಗಿಸಲಾಗುವುದು.**
2. **ಇನ್ನುಳಿದ 259 ಅಂಗವಿಕಲ ಅಭ್ಯರ್ಥಿಗಳು ತಮ್ಮದೇ ಆದ ಲಿಪಿಕಾರರನ್ನು ಕರೆತರಲು ಆಯ್ಕೆ ಮಾಡಿಕೊಂಡಿರುತ್ತಾರೆ. ಸದರಿ 259 ಅಂಗವಿಕಲ ಅಭ್ಯರ್ಥಿಗಳು ಪರೀಕ್ಷಾ ದಿನದಂದು ಪರೀಕ್ಷಾ ಉಪಕೇಂದ್ರದ ಮುಖ್ಯಸ್ಥರನ್ನು ಲಿಪಿಕಾರರ ಸಹಾಯವನ್ನು ಒದಗಿಸುವಂತೆ ಕೋರಿದ್ದಲ್ಲಿ, ಸದರಿ ವ್ಯವಸ್ಥೆಯನ್ನು ಸಹ ಕಲ್ಪಿಸಲಾಗುವುದು.**
3. **ತಮ್ಮದೇ ಆದ ಲಿಪಿಕಾರರನ್ನು ಕರೆತರುವ ಅಂಗವಿಕಲ ಅಭ್ಯರ್ಥಿಗಳು ತಮ್ಮ ಪ್ರವೇಶ ಪತ್ರದೊಂದಿಗೆ ಲಿಪಿಕಾರರ ಪ್ರವೇಶ ಪತ್ರವನ್ನು ಸಹ ಡೌನ್ ಲೋಡ್ ಮಾಡಿಕೊಳ್ಳತಕ್ಕದ್ದು.**

ಸಹಿ/-
ಕಾರ್ಯದರ್ಶಿ
ಕರ್ನಾಟಕ ಲೋಕಸೇವಾ ಆಯೋಗ.